ಪಿಡಬ್ಲ್ಯೂ -1

ಇಂದು ದಿ. 27-02-2026 ರಂದು ಸಾಕ್ಷಿಗೆ ಪ್ರಮಾಣವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆಃ ಅರ್ಜಿದಾರರ ಪರ ವಕೀಲರಿಂದ.

ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣಪತ್ರ ರೂಪದಲ್ಲಿ ಸಲ್ಲಿಸಿದ್ದು, ಅದರಲ್ಲಿನ ಎಲ್ಲಾ ಅಂಶಗಳನ್ನು ಓದಿ ತಿಳಿದುಕೊಂಡು ಅದಕ್ಕೆ ಸಹಿ ಮಾಡಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲಾ ವಿಷಯಗಳು ಸತ್ಯವಾಗಿರುತ್ತವೆ.

ನಾನು ಲಿಂಗಾಪುರ ಗ್ರಾಮದ ಸರ್ವೆ ನಂ.55/3 ಎ ಮತ್ತು 3 ಬಿ ಪಹಣಿಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ನಿ.ಪಿ.1 ಮತ್ತು 2 ಎಂದು ಗುರುತಿಸಲಾಯಿತು. ಅಲ್ಲದೇ ವಂಶವೃಕ್ಷದ ಕುರಿತಾದ ಪ್ರಮಾಣ ಪತ್ರ ಹಾಜರುಪಡಿಸಿದ್ದು, ಅದನ್ನು ನಿ.ಪಿ.3 ಎಂದು, ಅಜ್ಜಪ್ಪರವರ ಮರಣ ದಾಖಲೆ ಹಾಜರುಪಡಿಸಿದ್ದು, ಅದನ್ನು ನಿ.ಪಿ.4 ಎಂದು, ಅಲ್ಲದೇ ತಾಯಿ ಕಾಂತಮ್ಮ ಅವರ ಮರಣ ದಾಖಲೆ ಹಾಜರುಪಡಿಸಿದ್ದು, ಅದನ್ನು ನಿ.ಪಿ.5 ಎಂದು, ಅಲ್ಲದೇ ಕನ್ನಡ ಪ್ರಭ ಪತ್ರಿಕೆಯ ಜಾಹೀರಾತು ಕಾಲಂ ಅನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ.6 ಎಂದು ಗುರುತಿಸಲಾಯಿತು. ನಾನು ನನ್ನ ತಂದೆ ನನಗೆ ಮತ್ತು ನನ್ನ ಅಣ್ಣನಿಗೆ ಮಾಡಿದ ವಿಲ್ ನಾಮೆಯನ್ನು ನೋಡಿದರೆ ಗುರುತಿಸುತ್ತೇನೆ. ಅದರಲ್ಲಿ ನನ್ನ ತಂದೆಯ ಹೆಬ್ಬೆಟ್ಟಿನ ಗುರುತು ಇರುತ್ತದೆ. ಸದರಿ ವಿಲ್ ನಾಮೆಗೆ ನಾಗಪ್ಪ ಮತ್ತು ರಾಮಪ್ಪ ಸಾಕ್ಷಿದಾರರಾಗಿ ಸಹಿ ಮಾಡಿರುತ್ತಾರೆ. ಅಲ್ಲದೇ ಅದನ್ನು ಮಲ್ಲಿಕಾರ್ಜುನರವರು ಬೆರಳಚ್ಚು ಮಾಡಿರುತ್ತಾರೆ. ಈ ಎಲ್ಲಾ ದಾಖಲೆಗಳ ಆಧಾರದ ಮೇಲೆ ನನ್ನ ಅರ್ಜಿಯನ್ನು ಪುರಸ್ಕರಿಸಬೇಕಾಗಿ ವಿನಂತಿಸಿಕೊಳ್ಳುತ್ತೇನೆ.

**ಪಾಟೀಸವಾಲುಃ ಎದುರುದಾರರ ಪರ ವಕೀಲರಿಂದಃ**

ಏಕತರ್ಫಿಯವಾಗಿರುತ್ತಾರೆ.

ಮರುವಿಚಾರಣೆ ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿಯಾಗಿದೆ

2ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು
ದಾವಣಗೆರೆ.

ಪಿಡಬ್ಲ್ಯೂ -2

ಇಂದು ದಿ. 27-02-2026 ರಂದು ಸಾಕ್ಷಿಗೆ ಪ್ರಮಾಣವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಅರ್ಜಿದಾರರ ಪರ ವಕೀಲರಿಂದ.**

ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣಪತ್ರ ರೂಪದಲ್ಲಿ ಸಲ್ಲಿಸಿದ್ದು, ಅದರಲ್ಲಿನ ಎಲ್ಲಾ ಅಂಶಗಳನ್ನು ಓದಿ ತಿಳಿದುಕೊಂಡು ಅದಕ್ಕೆ ಸಹಿ ಮಾಡಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲಾ ವಿಷಯಗಳು ಸತ್ಯವಾಗಿರುತ್ತವೆ.

ನಾನು ಅಜ್ಜಪ್ಪ ಇವರು ಅರ್ಜಿದಾರರ ಪರ ಮರಣಶಾಸನ ಬರೆಯುವಾಗ ಹಾಜರಿದ್ದು, ನಂತರ ಸದರಿಯವರ ಸಮಕ್ಷಮ ನಾನು ಅವರು ಬರೆದಿರುವ ಗಣಕೀಕೃತ ಮರಣ ಶಾಸನಕ್ಕೆ ಸಹಿ ಮಾಡಿರುತ್ತೇನೆ. ಸಾಕ್ಷಿಯು ಸದರಿ ಮರಣ ಶಾಸನವನ್ನು ನೋಡಿ ಗುರುತಿಸಿದ್ದು, ಅದನ್ನು ನಿ.ಪಿ.7 ಎಂದು, ಅದರಲ್ಲಿ ಸಾಕ್ಷಿಯು ತನ್ನ ಸಹಿಯನ್ನು ಹಾಗೂ ಅಜ್ಜಪ್ಪ ಅವರ ಹೆಬ್ಬೆಟ್ಟಿನ ಗುರುತನ್ನು ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿ.ಪಿ.7(ಎ) ಎಂದು, ಅಜ್ಜಪ್ಪ ಅವರ ಹೆಬ್ಬೆಟ್ಟಿನ ಗುರುತನ್ನು 7(ಬಿ) ಮತ್ತು 7(ಸಿ) ಎಂದು ಗುರುತಿಸಲಾಯಿತು. ಆ ಸಮಯದಲ್ಲಿ ನನ್ನ ಜೊತೆ ರಾಮಪ್ಪ ಎನ್ನುವವರು ಕೂಡ ಸಹಿ ಮಾಡಿರುತ್ತಾರೆ. ಅಲ್ಲದೇ ಅದನ್ನು ಮಲ್ಲಿಕಾರ್ಜುನ ಎನ್ನುವವರು ಬೆರಳಚ್ಚು ಮಾಡಿರುತ್ತಾರೆ.

**ಪಾಟೀಸವಾಲುಃ ಎದುರುದಾರರ ಪರ ವಕೀಲರಿಂದಃ**

ಏಕತರ್ಪಿಯವಾಗಿರುತ್ತಾರೆ.

ಮರುವಿಚಾರಣೆ ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿಯಾಗಿದೆ

2ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು
ದಾವಣಗೆರೆ.

ಪಿಡಬ್ಲ್ಯೂ -3

ಇಂದು ದಿ. 27-02-2026 ರಂದು ಸಾಕ್ಷಿಗೆ ಪ್ರಮಾಣವಚನ ಬೋಧೀಸಲಾಯಿತು.

**ಮುಖ್ಯ ವಿಚಾರಣೆಃ ಅರ್ಜಿದಾರರ ಪರ ವಕೀಲರಿಂದ.**

ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣಪತ್ರ ರೂಪದಲ್ಲಿ ಸಲ್ಲಿಸಿದ್ದು, ಅದರಲ್ಲಿನ ಎಲ್ಲಾ ಅಂಶಗಳನ್ನು ಓದಿ ತಿಳಿದುಕೊಂಡು ಅದಕ್ಕೆ ಸಹಿ ಮಾಡಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲಾ ವಿಷಯಗಳು ಸತ್ಯವಾಗಿರುತ್ತವೆ.

ನಾನು ಅಜ್ಜಪ್ಪ ಇವರು ಅರ್ಜಿದಾರರ ಪರ ಮರಣಶಾಸನ ಬರೆಯುವಾಗ ಹಾಜರಿದ್ದು, ನಂತರ ಸದರಿ ಮರಣಶಾಸನವನ್ನು ನಾನೇ ಬೆರಳಚ್ಚು ಮಾಡಿರುತ್ತೇನೆ. ನಂತರ ಸದರಿಯವರು ಹಾಗೂ ಪ್ರಾ.ಸಾ.2 ಮತ್ತು ರಾಮಪ್ಪ ಸದರಿ ಮರಣ ಶಾಸನ ನಿ.ಪಿ.7 ಕ್ಕೆ ಹೆಬ್ಬೆಟ್ಟು ಹಾಗೂ ಸಹಿ ಮಾಡಿರುತ್ತಾರೆ. ಅಲ್ಲದೇ ನಾನು ಕೂಡ ಅದಕ್ಕೆ ಸಹಿ ಮಾಡಿರುತ್ತೇನೆ. ಸಾಕ್ಷಿಯು ನಿ.ಪಿ.7 ರಲ್ಲಿ ಅಜ್ಜಪ್ಪ ಅವರ ಹೆಬ್ಬೆಟ್ಟಿನ ಗುರುತನ್ನು ಹಾಗೂ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿ.ಪಿ.7(ಡಿ) ಎಂದು ಗುರುತಿಸಲಾಯಿತು.

**ಪಾಟೀಸವಾಲುಃ ಎದುರುದಾರರ ಪರ ವಕೀಲರಿಂದಃ**

ಏಕತರ್ಫಿಯವಿರುತ್ತದೆ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿಯಾಗಿದೆ

2ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು
ದಾವಣಗೆರೆ.